ದಿನಾಂಕ: 20.02.2021 ರಂದು 10–30 ಕ್ಕೆ ಡಾ. ಸುರೇಶ್, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್–179 (ಶಾಖಾಂಬರಿನಗರ) ನಡೆದ ಸಭೆಯ ನಡಾವಳಿಗಳು:

## : ಚರ್ಚೆಯಾದ ವಿಷಯಗಳು :

1. ವಾರ್ಡ್–179ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ರಸ್ತೆ ಕಾಮಗಾರಿಗಳ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 179ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಜೆ.ಪಿ.ನಗರ ಬೆಸ್ಕಾಂ ಅಭಿಯಂತರರು |
| ಸದಸ್ಯರುಗಳು | ಬಿಡಬ್ಲ್ಯೂಎಸ್ಎಸ್‌ಬಿ ಅಭಿಯಂತರರು |
| ಸದಸ್ಯರುಗಳು | ಅರಣ್ಯ ಸಂರಕ್ಷಣಾಧಿಕಾರಿಗಳು |
| ಸದಸ್ಯರುಗಳು | ಬೀದಿ ದೀಪ ನಿರ್ವಹಣಾ ಅಭಿಯಂತರರು |
| ಸದಸ್ಯರುಗಳು | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| ಸದಸ್ಯರುಗಳು | ರಸ್ತೆ ಮೂಲಭೂತ ಸೌಕರ್ಯ (ದಕ್ಷಿಣ) |
| ಸದಸ್ಯರುಗಳು | ಯೋಜನೆ (ದಕ್ಷಿಣ) |
| ಸದಸ್ಯರುಗಳು | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| ಸದಸ್ಯರುಗಳು | ಬೃಹತ್ ನೀರುಗಾಲುವೆ ಅಭಿಯಂತರರು |
| ಸದಸ್ಯರುಗಳು | ತೋಟಗಾರಿಕಾ ಅಧೀಕ್ಷಕರು (ದಕ್ಷಿಣ) |
| ಸದಸ್ಯರುಗಳು | ನಾಗರೀಕ ಕಲ್ಯಾಣ ಸಂಘ |

## :ನಡಾವಳಿಯ ವರದಿ:

- ಸದಸ್ಯ ಕಾರ್ಯದರ್ಶಿಗಳಾದ ಶ್ರೀಮತಿ ಅನುಪಾ .ಎ.ಎಂ. ಸಹಾಯಕ ಇಂಜಿನಿಯರ್ ವಾರ್ಡ್ 179 ಶಾಖಾಂಬರಿನಗರ, ಜೆ.ಪಿ.ನಗರ ಉಪವಿಭಾಗ ರವರು ಮಾತನಾಡುತ್ತಾ ಸಭೆಗೆ ಹಾಜರಾದ ವಾರ್ಡ್ ಸಮಿತಿಯ ಮಾನ್ಯ ಅಧ್ಯಕ್ಷರು, ಸದಸ್ಯರು ಹಾಗೂ ಪಾಲಿಕೆಯ ಮತ್ತು ಎಲ್ಲಾ ಇಲಾಖೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**ಪು.ತಿ.ನೋ.**

<u>ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.</u>

- 2021-2022ನೇ ಸಾಲಿನ ಆಯವ್ಯಯದ ಅಂದಾಜುಪಟ್ಟಿಯ ಬಗ್ಗೆ ಚರ್ಚಿಸಲಾಯಿತು.
  1. ಹೆಲ್ತ್ ವಾರ್ಡ್ ಕಛೇರಿಗೆ ಮೂಲಭೂತ ಸೌಕರ್ಯಗಳಾದ ಶೌಚಾಲಯ, ಛೇರ್ ಟೇಬಲ್ ಮತ್ತು ನೀರಿನ ಸಂಪರ್ಕವನ್ನು ಕಲ್ಪಿಸಲು ರೂ. 30.00 ಲಕ್ಷಗಳು.
  2. ಬ್ಲಾಕ್ ಸ್ಪಾಟ್ ಸುಂದರೀಕರಣ ಮತ್ತು ಡಿಡಬ್ಲ್ಯೂಸಿಸಿ ಘಟಕಕ್ಕೆ ಮೂಲಭೂತ ಸೌಕರ್ಯಗಳಿಗೆ ರೂ. 20.00 ಲಕ್ಷಗಳು.

- ಬಿಡಬ್ಲ್ಯೂಎಸ್ಎಸ್‌ಬಿ ರೋಡ್ ಕಟ್ಟಿಂಗ್‌ಗಳಿಗೆ ಪ್ಯಾಚ್ ವರ್ಕ್ ಮಾಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಚರ್ಚಿಸಲಾಯಿತು.

- 5ನೇ ಮತ್ತು 6ನೇ ಅಡ್ಡರಸ್ತೆಯ ಗುರುಮೂರ್ತಪ್ಪ ಕಾಂಪೌಂಡ್ ಹತ್ತಿರ ಬಿಡಬ್ಲ್ಯೂಎಸ್ಎಸ್‌ಬಿ ರವರು ಮ್ಯಾನ್‌ಹೋಲ್‌ಗಳನ್ನು ರಸ್ತೆಮಟ್ಟಕ್ಕೆ ಹಾಕುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಚರ್ಚಿಸಲಾಯಿತು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಬೆಳಿಗ್ಗೆ 10.30 ಕ್ಕೆ ಇದೇ ರೀತಿಯಾಗಿ ಮಾಸಿಕ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, (ಜೆ.ಪಿ.ನಗರ) ಉಪವಿಭಾಗದ ಶ್ರೀಮತಿ ಅನುಷಾ .ಎ.ಎಂ. ಸಹಾಯಕ ಇಂಜಿನಿಯರ್ ವಾರ್ಡ್ 179 ಶಾಖಾಂಬರಿನಗರ, ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| **ವಾರ್ಡ್ ಸಮಿತಿ ಅಧ್ಯಕ್ಷರು** | **ಸದಸ್ಯ ಕಾರ್ಯದರ್ಶಿ ಹಾಗೂ** |
| **ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ** | **ಸಹಾಯಕ ಅಭಿಯಂತರರು ವಾರ್ಡ್ 179** |
| **ವಾರ್ಡ್ ನಂ. 179 ಶಾಖಾಂಬರಿನಗರ** | **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ** |